೩೦

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಅಧಿವೇಶನ - ಹಕ್ಕುಚ್ಯುತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 10/3/2021

# ಸಿಎಂ ವಿರುದ್ಧ ಹಕ್ಕುಚ್ಯುತಿ ಮಂಡನೆಗೆ ಮನವಿ

10/3/21

**ವಿಧಾನಪರಿಷತ್ತು:** ಸಿಡಿ ಬಿಡುಗಡೆ ವಿಚಾರ ನನ್ನ ಗಮನಕ್ಕೆ ಬಂದಿಲ್ಲ ಎಂದು ಮುಖ್ಯಮಂತ್ರಿಯವರು ತಪ್ಪು ಮಾಹಿತಿ ನೀಡಿದ್ದಾರೆ. ಹಾಗಾಗಿ ಅವರ ವಿರುದ್ಧ ಹಕ್ಕುಚ್ಯುತಿ ಮಂಡಿಸುವುದಾಗಿ ಕಾಂಗ್ರೆಸ್ ಸದಸ್ಯ ಸಿ.ಎಂ.ಇಬ್ರಾಹಿಂ ಹೇಳಿದ್ದಾರೆ. ಮಂಗಳವಾರ ಕಲಾಪ ಆರಂಭವಾಗುತ್ತಿದ್ದಂತೆ ವಿಷಯ ಪ್ರಸ್ತಾಪಿಸಿದ ಸಿ.ಎಂ. ಇಬ್ರಾಹಿಂ, ಸಚಿವರೊಬ್ಬರ ಅಶ್ಲೀಲ ಸಿಡಿ ಬಿಡುಗಡೆ ಕುರಿತು ನಾನು ಮುಖ್ಯಮಂತ್ರಿಯವರಿಗೆ ಪ್ರಶ್ನೆ ಬರೆದು ಕಳುಹಿಸಿದ್ದೆ. ಆದರೆ, ಸಿಡಿ ಬಿಡುಗಡೆ ವಿಚಾರ ನನ್ನ ಗಮನಕ್ಕೆ ಬಂದಿಲ್ಲ ಎಂದು ಮುಖ್ಯಮಂತ್ರಿ ಲಿಖಿತ ಉತ್ತರ ಕೊಟ್ಟಿದ್ದಾರೆ. ಸಿಡಿ ವಿಚಾರ ಜಗಜ್ಜಾಹೀರಾಗಿದೆ. ಆರೋಪ ಕೇಳಿ ಬಂದ ಸಚಿವರು ರಾಜೀನಾಮೆ ಕೊಟ್ಟಿದ್ದಾರೆ. ಇಡೀ ರಾಜ್ಯ ಮತ್ತು ದೇಶ ಈ ವಿಷಯವನ್ನು ಗಮನಿಸಿದೆ. ಆದರೂ, ತಮಗೆ ಮಾಹಿತಿ ಇಲ್ಲ ಎಂದು ಸಿಎಂ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ. ಇದು ಸದನದ ಮತ್ತು ಸದಸ್ಯನ ಹಕ್ಕುಚ್ಯುತಿಯಾಗಿದೆ. ಆದ್ದರಿಂದ ಹಕ್ಕುಚ್ಯುತಿ ಮಂಡಿಸಲು ಅವಕಾಶ ಕೊಡಬೇಕೆಂದು ಮನವಿ ಮಾಡಿದರು. ಸೂಕ್ತ ನಿಯಮಗಳಡಿ ನೋಟಿಸ್ ಕೊಡಿ, ಪರಿಶೀಲಿಸಲಾಗುವುದು ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.